**ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ**

**ಘಟಕ ಮಹಿಳಾ ಕಾಲೇಜು ಮಲ್ಲೇಶ್ವರಂ.**

**77ನೇ ಗಣರಾಜ್ಯೋತ್ಸವ ದಿನಾಚರಣೆ**

**Date:26-01-2026**




ಸಂವಿಧಾನ ಜಾರಿಯಾದ ದಿನದ ಅಂಗವಾಗಿ ಆಚರಿಸಲ್ಪಡುವ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಡಾ.ಮನಮೋಹನ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಘಟಕ ಮಹಿಳಾ ಕಾಲೇಜಿನ ಆವರಣದಲ್ಲಿ ನೆರವೇರಿಸಲಾಯಿತು.

ಡಾ. ಬಿ.ಆರ್ ಅಂಬೇಡ್ಕರ್ ಮತ್ತು ಗಾಂಧೀಜಿಯವರ ಭಾವಚಿತ್ರಕ್ಕೆ ಉಪನ್ಯಾಸಕ ವರ್ಗದವರು ಮತ್ತು ವಿದ್ಯಾರ್ಥಿಗಳು ಪುಷ್ಪ ನಮನ ಸಲ್ಲಿಸಿ ರಾಷ್ಟ್ರಗೀತೆ ಹಾಡುವ ಮುಖೇನ ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು.

ಕನ್ನಡ ಅಧ್ಯಾಪಕಿ ಡಾ.ಶೋಭಾ.ಸಿ ಅವರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಬಹುತ್ವ ಭಾರತವನ್ನು ಎತ್ತಿ ಹಿಡಿದಂತಹ ಭಾರತ ಸಂವಿಧಾನ ಪ್ರಜಾಪ್ರಭುತ್ವ, ಜಾತ್ಯತೀತತೆ ಮತ್ತು ಸಾಮಾಜಿಕ ನ್ಯಾಯವೆಂಬ ಸಿದ್ಧಾಂತಗಳನ್ನು ಬಿತ್ತಿ ಬೆಳೆಸುತ್ತಿದೆ ಎಂದು ಅವರು ವಿವರಿಸಿದರು.

ವಿದ್ಯಾರ್ಥಿ ರಶ್ಮಿತಾ ಕಾರ್ಯಕ್ರಮ ನಿರೂಪಿಸಿದರು.